# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ ಸಾರ್ವಜನಿಕ ಕುಂದುಕೊರತೆ ನಿವಾರಣಾ ಪ್ರಾಧಿಕಾರದ ಆದೇಶದ ವಿರುದ್ಧ ಕೆ. ಲಿಂಗರಾಜು ಬಿನ್ ಕೋಟಪ್ಪ, ಬಿಲ್ ಕಲೆಕ್ಟರ್, ಅಜ್ಜಂಪುರ ಗ್ರಾಮ ಪಂಚಾಯತಿ, ಅಜ್ಜಂಪುರ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ರವರು ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಿರುವ ಕುರಿತು.

**ಓದಲಾಗಿದೆ:**

1. ಚಿಕ್ಕಮಗಳೂರು ಜಿಲ್ಲಾ ಪಂಚಾಯತಿ ಸಾರ್ವಜನಿಕ ಕುಂದುಕೊರತೆ ನಿವಾರಣಾ ಪ್ರಾಧಿಕಾರದ ಆದೇಶ ಸಂಖ್ಯೆ:ಜಿ.ಪಂ.ಚಿ/ಕು.ಕೊ.ಪ್ರಾ/ಸಿ.ಆರ್.130/2018-19, ದಿನಾಂಕ:11.01.2019.
2. ಕೆ. ಲಿಂಗರಾಜು ಬಿನ್ ಕೋಟಪ್ಪ, ಬಿಲ್ ಕಲೆಕ್ಟರ್, ಗ್ರಾಮ ಪಂಚಾಯತಿ, ಅಜ್ಜಂಪುರ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರು ಸರ್ಕಾರಕ್ಕೆ ಮೇಲ್ಮನವಿ ಸಲ್ಲಿಸಿರುವ ದಿನಾಂಕ:17.05.2018

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮಾಂಕ (1)ರ ಕುಂದುಕೊರತೆ ನಿವಾರಣಾ ಪ್ರಾಧಿಕಾರ, ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು ರವರ ಆದೇಶದಲ್ಲಿ ಮೀಸಲಾತಿ ರೋಸ್ಟರ ಅನ್ವಯ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಕ್ರಮ ತೆಗೆದುಕೊಳ್ಳುವ ಬಗ್ಗೆ ಅಥವಾ ಈಗಾಗಲೇ ಸ್ವೀಕೃತವಾದ 10 ಅರ್ಜಿಗಳಲ್ಲಿ ಸೂಕ್ತ ಮಾನದಂಡದನ್ವಯ ಅರ್ಹರಾದವರನ್ನು ಆಯ್ಕೆ ಮಾಡಲು ಅಥವಾ ಹೆಚ್ಚುವರಿ ಬಿಲ್‌ಕಲೆಕ್ಟರ್ ಹುದ್ದೆಗೆ ನೀಡಿರುವ ಅನುಮೋದನೆಯನ್ನು ರದ್ದು ಮಾಡಲು ಜಿಲ್ಲಾ ಪಂಚಾಯಿತಿಗೆ ಪ್ರಸ್ತಾವನೆ ಕಳುಹಿಸಲು, ದೂರುದಾರರ ದೂರನ್ನು ನಿಯಮಗಳನ್ವಯ ಪರಿಗಣಿಸಿ ಕ್ರಮಕ್ಕಾಗಿ ಜಿಲ್ಲಾ ಪಂಚಾಯಿತಿಗೆ ಪ್ರಸ್ತಾವನೆ ಕಳುಹಿಸಲು ಅಥವಾ ಕಾನೂನಿನ್ವಯ ಬೇರೆ ನಿರ್ಣಯ ತೆಗೆದುಕೊಳ್ಳುವ ಬಗ್ಗೆ ಗ್ರಾಮ ಪಂಚಾಯಿತಿ ಮುಂದಿನ ಸಭೆಯಲ್ಲಿಯೇ ನಿರ್ಣಯ ತೆಗೆದುಕೊಳ್ಳುವಂತೆ ನಿರ್ಣಯವನ್ನು ನೀಡಿರುತ್ತಾರೆ.

ಮೇಲೆ ಓದಲಾದ ಕ್ರಮಾಂಕ (2)ರಲ್ಲಿ ಕೆ. ಲಿಂಗರಾಜು ಬಿನ್ ಕೋಟಪ್ಪ, ಬಿಲ್ ಕಲೆಕ್ಟರ್, ಅಜ್ಜಂಪುರ ಗ್ರಾಮ ಪಂಚಾಯತಿ, ಅಜ್ಜಂಪುರ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರು ಸರ್ಕಾರಕ್ಕೆ ಸಲ್ಲಿಸಿರುವ ಮೇಲ್ಮನವಿಯಲ್ಲಿ, "ನಾನು ದಿನಾಂಕ: 10.02.2007 ರಿಂದ ಗ್ರಾಮ ಪಂಚಾಯಿತಿ ಅಜ್ಜಂಪುರದಲ್ಲಿ ಬಿಲ್‌ಕಲೆಕ್ಟರ್ ಹುದ್ದೆಗೆ ಸೇರಿ ಅಲ್ಲಿಂದ ಈ ವರೆಗೆ ಯಾವುದೇ ಲೋಪ ದೋಷಗಳಿಲ್ಲದೆ ನಿರಂತರವಾಗಿ ವಿವಿದ ಕೆಲಸ ಕಾರ್ಯಗಳನ್ನು ನಿರ್ವಹಿಸುತ್ತ ಬಂದಿರುತ್ತೇನೆ. ನಂತರದಲ್ಲಿ ಸರ್ಕಾರಿ ಸುತ್ತೋಲೆ ಸಂಖ್ಯೆ: ಗ್ರಾಅಪ 27 ಗ್ರಾಪಂಸಿ 2015, ದಿನಾಂಕ: 09.03.2016 ರ ಅನ್ವಯ ನನಗೆ ಜಿಲ್ಲಾ ಪಂಚಾಯಿತಿ ಅಧಿಕೃತ ಜ್ಞಾಪನ ಸಂಖ್ಯೆ: ಜಿ.ಪಂ.ಚಿ. ಆ1 (6) ಗ್ರಾ.ಪಂ.ಸಿ. 102 (18) 2014-15 ದಿನಾಂಕ:31.12.2016ರ ಅನ್ವಯ ಅನುಮೋದನೆ ಸಹ ನೀಡಿದ್ದು, ನಂತರದಲ್ಲಿ ಕುಂದು ಕೊರತೆ ನಿವಾರಣಾ ಪ್ರಾಧಿಕಾರವರಿಂದ ಆದೇಶಿಸಿರುವಂತೆ ಯಾವುದೇ ನನ್ನ ಹುದ್ದೆಯ ತೀರ್ಮಾನವನ್ನ ಸಭೆಯ ತೀರ್ಮಾನಕ್ಕೆ ನೀಡಿದ್ದು, ಅದರಂತೆ ಗ್ರಾಮ ಪಂಚಾಯಿತಿ ಎರಡು ಸಭೆಗಳಲ್ಲಿ ನನ್ನ ಪರವಾಗಿ ಅಂದರೆ ಯಥಾಸ್ಥಿತಿ ಹುದ್ದೆಯಲ್ಲಿ ಮುಂದುವರಿಸಿಕೊಂಡು ಹೋಗುವಂತೆ ತೀರ್ಮಾನಿಸಿರುತ್ತಾರೆ. ನಂತರದಲ್ಲಿ ಸಭಾ ನಡುವಳಿಯನ್ನು ಮೇಲ್ಮನವಿ ಪ್ರಾಧಿಕಾರಗಳಾದ ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳಿಗೆ ಕಳುಹಿಸಿಕೊಡಲಾಗಿತ್ತು. ಆದರೂ ಸಹ ಯಾವುದೇ ಈ ಬಗ್ಗೆ ನಿರ್ದಿಷ್ಟ ಆದೇಶ ನೀಡದೆ ಮೌಖಿಕವಾಗಿ ನನ್ನನ್ನು ಸೇವೆಯಿಂದ ವಜಾಗೊಳಿಸುವಂತೆ ತಿಳಿಸುತ್ತಿದ್ದು, ಪಂಚಾಯಿತಿ ಅಭಿವೃದ್ಧಿ ಅಧಿಕಾರಿರವರು ನನ್ನನ್ನು ಸೇವೆಯಿಂದ ವಜಾಗೊಳಿಸುವ ಹುನ್ನಾರ ನಡೆಸುತ್ತಿರುವುದು ನನ್ನ ಗಮನಕ್ಕೆ ಬಂದಿರುತ್ತದೆ ಹಾಗೂ ನಾನು 13 ವರ್ಷಗಳ ಕಾಲ ನಿರಂತರವಾಗಿ ಸೇವೆ ಸಲ್ಲಿಸುತ್ತಾ ಬಂದಿದ್ದು ನನ್ನ ವಯೋಮಿತಿ ಕೂಡ ಮೀರಿಹೋಗಿರುತ್ತದೆ ಹಾಗೂ ಯಾವುದೇ ನೇಮಕಾತಿ ಪ್ರಕ್ರಿಯೆಯಲ್ಲಿ ಭಾಗವಹಿಸುವಂತಿರುವುದಿಲ್ಲ ಮತ್ತು ನಾನು ವಿವಾಹಿತನಾಗಿದ್ದು

ಸಂಸಾರದ ಪೋಣೆಗಾರಿಕೆ ಹಾಗೂ ಮಕ್ಕಳ ಸಾಕಿ ಸಲಹುವ ಜವ್ದಾರಿ ನನ್ನ ಮೇಲೆ ಇರುತ್ತದೆ. ನನ್ನ ಜೀವನ ನಿರ್ವಹಣೆ ಕಷ್ಟ ಕರವಾಗಿದ್ದು ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಸಭೆ ಕರೆದು ಸೇವೆಯಿಂದ ವಜಾಗೊಳಿಸುವ ಪ್ರಯತ್ನದಲ್ಲಿರುತ್ತಾರೆ. ನನಗೆ ಮುಂದಿನ ಭವಿಷ್ಯದ ಬಗ್ಗೆ ಗಾಬರಿ ಮತ್ತು ಭಯವಾಗಿರುತ್ತದೆ ಆದುದರಿಂದ ನನಗೆ ತಿಳಿದು ಬಂದಿರುವಂತೆ ತಮ್ಮ ಇಲಾಖೆಯ ಸುತ್ತೋಲೆ ಸಂಖ್ಯೆ: ಗ್ರಾಅಪ 74 ಗ್ರಾಪಂಸಿ 2017, ದಿನಾಂಕ: 14.06.2018 ಮತ್ತು ಸುತ್ತೋಲೆ ಸಂಖ್ಯೆ: ಗ್ರಾಅಪ 174 ಗ್ರಾಪಂಸಿ 2018, ದಿನಾಂಕ:23.07.2019 ರ ಸುತ್ತೋಲೆಗಳಲ್ಲಿ ತಿಳಿಸಿರುವಂತೆ ನನಗೆ ಯಾವುದೇ ರೀತಿಯ ತೊಂದರೆ ಆಗದಂತೆ ಹಾಗೂ ಗ್ರಾ.ಪಂ. ಸಭೆಗಳ ತೀರ್ಮಾನದಂತೆ ಯಥಾ ಸ್ಥಿತಿಯಲ್ಲಿ ನನಗೆ ಸೇವೆ ಮುಂದುವರಿಸಿಕೊಂಡು ಹಾಗೂ ಯಥಾ ಸ್ಥಿತಿ ನನ್ನ ಹುದ್ದೆಯಲ್ಲಿ ಕಾರ್ಯನಿರ್ವಹಿಸಿಕೊಂಡು ಹೋಗುವಂತೆ ಮತ್ತು ತಡೆ ಹಿಡಿದಿರುವ ವೇತನವನ್ನು ಪಾವತಿಸುವಂತೆ ಸಂಬಂಧಪಟ್ಟರವರಿಗೆ ನಿರ್ದೇಶನ ನೀಡಿ ನನಗೆ ಸಹಕರಿಸುವಂತೆ ತಮ್ಮಲ್ಲಿ ಕಳಕಳಿಯಿಂದ ಮನವಿ ಮಾಡಿಕೊಳ್ಳುತ್ತೇನೆ".

ಸದರಿ ಮೇಲ್ಮನವಿಯನ್ನು ಪರಿಶೀಲಿಸಲಾಗಿ, ಪ್ರಕರಣದ ವಿಚಾರಣೆಯನ್ನು ಸರ್ಕಾರದ ಪ್ರಧಾನ ಕಾರ್ಯದರ್ಶಿಯವರ ಅರೆನ್ಯಾಯಿಕ ನ್ಯಾಯಾಲಯದಲ್ಲಿ ನಡೆಸಲು ತೀರ್ಮಾನಿಸಿ, ಅದರಂತೆ ದಿನಾಂಕ:06.11.2019ರಂದು ವಿಚಾರಣೆಗೆ ತೆಗೆದುಕೊಂಡು ವಿಚಾರಣೆ ನಡೆಸಲಾಯಿತು.

ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 438 ಗ್ರಾಪಂಅ 2019 ಬೆಂಗಳೂರು, ದಿನಾಂಕ: 14.01.2020.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೆ. ಲಿಂಗರಾಜು ಬಿನ್ ಕೋಟಪ್ಪ ಮತ್ತು ಸಿ. ಪರಮೇಶ್ವರಪ್ಪ ಬಿನ್ ಚಂದ್ರಪ್ಪ, ಬಿಲ್‌ಕಲೆಕ್ಟರ್ ಅಜ್ಜಂಪುರ ಗ್ರಾಮ ಪಂಚಾಯಿತಿ, ಅಜ್ಜಂಪುರ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ಇವರುಗಳಿಗೆ ಬಿಲ್‌ಕಲೆಕ್ಟರ್ ಹುದ್ದೆಗೆ ದಿನಾಂಕ:29.01.2007ರ ಗ್ರಾಮ ಪಂಚಾಯತಿಯ ಸಮಾನ್ಯ ಸಭೆಯಲ್ಲಿ ನೇಮಕ ಮಾಡಿಕೊಂಡಿರುವುದು ದಾಖಲೆಗಳಲ್ಲಿ ಕಂಡು ಬಂದಿರುತ್ತದೆ ಹಾಗೂ ಹೆಚ್ಚುವರಿ ಸಿಬ್ಬಂದಿಗೆ ಕುರಿತಂತೆ ಈಗಾಗಲೇ ಸರ್ಕಾರದ ಪತ್ರ ಸಂಖ್ಯೆ: ಗ್ರಾಅಪ 74 ಗ್ರಾಪಂಸಿ 2017 ದಿನಾಂಕ:14.06.2018ರಲ್ಲಿ ಎಲ್ಲಾ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿವಾಹಕ ಅಧಿಕಾಗಳಿಗೆ ನೀಡಿರುವ ಸೂಚನೆ/ನಿಯಮಗಳಂತೆ ಕ್ರಮ ಕೈಗೊಳ್ಳಲು ತಿಳಿಸಿ, ಈ ಮೇಲ್ಮನವಿಯನ್ನು ಮುಕ್ತಾಯಗೊಳಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

14/1/2020
(ರಮೇಶ್ ಡಿ.ಪಿ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,(ಗ್ರಾ.ಪಂ)(ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಇವರಿಗೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು, ಚಿಕ್ಕಮಗಳೂರು ಜಿಲ್ಲೆ.
2. ಕುಂದುಕೊರತೆ ನಿವಾರಣಾ ಪ್ರಾಧಿಕಾರ, ಜಿಲ್ಲಾ ಪಂಚಾಯತಿ ಚಿಕ್ಕಮಗಳೂರು, ಚಿಕ್ಕಮಗಳೂರು ಜಿಲ್ಲೆ.
3. ಕಾರ್ಯನಿರ್ವಾಹಕಾಧಿಕಾರಿ, ತಾಲ್ಲೂಕು ಪಂಚಾಯಿತಿ ಅಜ್ಜಂಪುರ, ಚಿಕ್ಕಮಗಳೂರು ಜಿಲ್ಲೆ.98*
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಅಜ್ಜಂಪುರ ಗ್ರಾಮ ಪಂಚಾಯತಿ, ಅಜ್ಜಂಪುರ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.

5. ಶ್ರೀ ಕೆ. ಲಿಂಗರಾಜು ಬಿನ್ ಕೋಟಪ್ಪ ಮತ್ತು ಸಿ. ಪರಮೇಶ್ವರಪ್ಪ ಬಿನ್ ಚಂದ್ರಪ್ಪ, ಬಿಲ್‌ಕಲೆಕ್ಟರ್ ಅಜ್ಜಂಪುರ ಗ್ರಾಮ ಪಂಚಾಯಿತಿ, ಅಜ್ಜಂಪುರ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆ.
6. ಗಣಕ ಶಾಖೆ.

**ಪ್ರತಿಯನ್ನು ಮಾಹಿತಿಗಾಗಿ:**

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಮಾನ್ಯ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.